ದೇವರಾಜ ಅರಸು ಸಂಶೋಧನಾ ಸಂಸ್ಥೆ



ಸನ್ಮಾನ್ಯ ಮುಖ್ಯಮಂತ್ರಿಗಳ ಆಯ-ವ್ಯಯ ಭಾಷಣ

ಪ್ರವರ್ಗ–2ಎ ನಲ್ಲಿ ಬರುವ ಜಾತಿಗಳಿಗೆ ಒಂದು ಕೋಟಿ ರೂ.ವರೆಗಿನ ನಿರ್ಮಾಣ ಕಾಮಗಾರಿಗಳಲ್ಲಿ ಮೀಸಲಾತಿ ನೀಡಲಾಗುವುದು.

165. ಹಿಂದುಳಿದ ವರ್ಗಗಳಲ್ಲೇ ಅತ್ಯಂತ ಹಿಂದುಳಿದವರಾಗಿರುವ ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯದವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಈ ಜಾತಿಗಳ ಕುಲಶಾಸ್ತ್ರೀಯ ಅಧ್ಯಯನವನ್ನು ಡಿ. ದೇವರಾಜ ಅರಸು ಸಂಶೋಧನಾ ಸಂಸ್ಥೆ ಮುಖಾಂತರ ಕೈಗೊಳ್ಳಲು ಎರಡು ಕೋಟಿ ರೂ.ಗಳ ಅನುದಾನವನ್ನು ನೀಡಲಾಗುವುದು.

## ಅಲ್ಪಸಂಖ್ಯಾತರ ಕಲ್ಯಾಣ

166. ರಾಜ್ಯದ ಅಲ್ಪಸಂಖ್ಯಾತ ಸಮುದಾಯಗಳ ಏಳಿಗೆಗಾಗಿ ಶ್ರಮಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ಇದಕ್ಕಾಗಿ ಈ ಸಮುದಾಯಗಳ ಜನರಿಗೆ ಶಿಕ್ಷಣ ಹಾಗೂ ಉದ್ಯೋಗದ ಅವಕಾಶಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಕಲ್ಪಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿದೆ.

167. ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದ್ದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನವನ್ನು (1 ರಿಂದ 8ನೇ ತರಗತಿಯವರೆಗೆ) ಕೇಂದ್ರ ಸರ್ಕಾರವು ಸ್ಥಗಿತಗೊಳಿಸಿರುತ್ತದೆ. ಇದರಿಂದ ಅಲ್ಪಸಂಖ್ಯಾತ ಸಮುದಾಯದ ಬಡ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದನ್ನು ಮನಗಂಡು ನಮ್ಮ ಸರ್ಕಾರವು ಈ ಯೋಜನೆಯನ್ನು ಮುಂದುವರೆಸಲು 60 ಕೋಟಿ ರೂ. ಅನುದಾನವನ್ನು ಒದಗಿಸಲಿದೆ.